# <u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 965
ಸದಸ್ಯರ ಹೆಸರು : ಶ್ರೀ ಜಗದೇವ್ ಗುತ್ತೇದಾರ
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 20.08.2025

<table>
<tr><th>ಕ್ರ.<br>ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲ್ಯಾಣ ಕರ್ನಾಟಕದ ಸಾರಿಗೆ ಸಂಸ್ಥೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವೃಂದವಾರು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕು ವಿವರ ನೀಡುವುದು)</td><td>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಕಳೆದ ಐದು ವರ್ಷಗಳಲ್ಲಿ ಖಾಲಿ ಇರುವ ವೃಂದವಾರು ಹುದ್ದೆಗಳ ವಿವರ ಕೆಳಕಂಡಂತಿದೆ :-
<table>
<tr><th>ವೃಂದ</th><th>2020-21</th><th>2021-22</th><th>2022-23</th><th>2023-24</th><th>2024-25</th></tr>
<tr><td>ದರ್ಜೆ-1 ಆಯ್ಕೆ ಶ್ರೇಣಿ</td><td>4</td><td>4</td><td>4</td><td>6</td><td>5</td></tr>
<tr><td>ದರ್ಜೆ-1 ಕಿರಿಯ</td><td>16</td><td>26</td><td>18</td><td>8</td><td>8</td></tr>
<tr><td>ದರ್ಜೆ-2 ಅಧಿಕಾರಿ ಗಳು</td><td>69</td><td>66</td><td>71</td><td>61</td><td>65</td></tr>
<tr><td>ದರ್ಜೆ-3 ಮೇಲ್ವಿಚಾರಕ</td><td>375</td><td>275</td><td>317</td><td>330</td><td>239</td></tr>
<tr><td>ದರ್ಜೆ-3 ಮೇಲ್ವಿಚಾರಕೇತರ</td><td>1637</td><td>2019</td><td>2486</td><td>1463</td><td>1871</td></tr>
<tr><td>ದರ್ಜೆ-4</td><td>23</td><td>16</td><td>25</td><td>7</td><td>13</td></tr>
<tr><td>ಒಟ್ಟು</td><td>2124</td><td>2406</td><td>2921</td><td>1875</td><td>2201</td></tr>
</table>
ಹುದ್ದೆವಾರು ಹಾಗೂ ತಾಲ್ಲೂಕುವಾರು ವಿವರವನ್ನು 'ಅನುಬಂಧ'ದಲ್ಲಿ ನೀಡಲಾಗಿದೆ.</td></tr>
<tr><td>ಆ)</td><td>ಈ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣವೇನು; ಯಾವಾಗ ಭರ್ತಿ ಮಾಡ ಲಾಗುವುದು;</td><td>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ 2018-19ನೇ ಸಾಲಿನಿಂದ 2022-23ನೇ ಸಾಲಿನವರೆಗೆ ಯಾವುದೇ ನೇಮಕಾತಿ ಮಾಡಿರಲಿಲ್ಲ.<br><br>ಆದರೆ, ಪ್ರಸ್ತುತ ಜುಲೈ-2025ರ ಅಂತ್ಯಕ್ಕೆ 1619 ಚಾಲನಾ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲಾಗಿದೆ ಹಾಗೂ 2023-24ನೇ ಸಾಲಿನಲ್ಲಿ 123 ಮತ್ತು ಜುಲೈ-2025ರವರೆಗೆ 139 ಹೀಗೆ ಒಟ್ಟು 272 ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ.<br><br>ಅಲ್ಲದೇ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಚಾಲಕ, ನಿರ್ವಾಹಕ ಹುದ್ದೆಗಳ ಭರ್ತಿಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:-<br><br>ಈಗಾಗಲೇ ಅನುಮತಿಸಿರುವ 300 ನಿರ್ವಾಹಕ ಹುದ್ದೆಗಳಿಗೆ ಸಾಮಾನ್ಯ ಸಾಮರ್ಥ್ಯ ಪರೀಕ್ಷೆ (CAT)ಯನ್ನು ಕೈಗೊಳ್ಳುವ ಮೂಲಕ ಭರ್ತಿಮಾಡಬೇಕಾಗಿದ್ದು, ಈ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪತ್ರ ಬರೆದು ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿ, ಶೀಘ್ರವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ಕೋರಲಾಗಿರುತ್ತದೆ ಹಾಗೂ 2023-24ನೇ ಸಾಲಿನಲ್ಲಿ 1773 ನಿರ್ವಾಹಕ ಹುದ್ದೆಗಳ ನೇರ ನೇಮಕಾತಿ ಕುರಿತ ಪ್ರಸ್ತಾವನೆಗೆ ಪ್ರಸ್ತುತ ಒಳಮೀಸಲಾತಿಗೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ:25.11.2024 ಮತ್ತು 29.3.2025 ರನ್ವಯ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೂ ಹೊರಡಿಸದಂತೆ ಆದೇಶಿಸಲಾಗಿದೆ. ಈ ಹಿನ್ನೆಲೆಯಲ್ಲಿ ನೇಮಕಾತಿ ಮಾಡಿಕೊಳ್ಳಲು ಅನುಮತಿ ದೊರೆತ ನಂತರ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು.</td></tr>
</table>

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಖಾಲಿ ಇರುವ ಹುದ್ದೆಗಳ ಕಾರಣಕ್ಕಾಗಿ ಬಸ್ಸುಗಳ ಓಡಾಟ ಕಡಿಮೆಯಾಗಿದೆಯೇ; ಆಗಿದ್ದಲ್ಲಿ ಸಾರಿಗೆ ಸಂಸ್ಥೆಯ ಆರ್ಥಿಕ ಸ್ಥಿತಿಗತಿಯ ವಿವರ ನೀಡುವುದು? | ಖಾಲಿ ಇರುವ ಹುದ್ದೆಗಳ ಕಾರಣಕ್ಕಾಗಿ ಬಸ್ಸುಗಳ ಆಚರಣೆ ಕಡಿಮೆಯಾಗಿರುವುದಿಲ್ಲ. 2018-19ನೇ ಸಾಲಿನಿಂದ 2022-23ನೇ ಸಾಲಿನವರೆಗೆ ನಿಗಮದಲ್ಲಿ ಯಾವುದೇ ನೇಮಕಾತಿ ಯಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಸಾರಿಗೆ ಸೌಲಭ್ಯ ದೊರಕಿಸುವ ನಿಟ್ಟಿನಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ವಿವಿಧ ಏಜೆನ್ಸಿಯವರಿಂದ ಅಗತ್ಯವಿರುವ ಖಾಸಗಿ ಚಾಲಕರನ್ನು ನಿಯಮಾನುಸಾರ ನಿಯೋಜಿಸಿಕೊಳ್ಳಲಾಗುತ್ತಿದೆ. ಅದರಂತೆ, ನಿಗಮದಲ್ಲಿ 973 ಚಾಲಕರನ್ನು ಹೊರ ಗುತ್ತಿಗೆ ಆಧಾರದ ಮೇಲೆ ನಿಯೋಜಿಸಿಕೊಳ್ಳಲಾಗಿದೆ.<br><br>ಮುಂದುವರೆದು, ಕ.ಕ.ರ.ಸಾ.ನಿಗಮದಲ್ಲಿ 2023-24 ಮತ್ತು 2024-25ನೇ ಸಾಲಿನಲ್ಲಿ ಹೊಸದಾಗಿ 1031 ಬಸ್ಸುಗಳನ್ನು ಖರೀದಿಸಿ ಸೇರ್ಪಡೆಗೊಳಿಸಲಾಗಿದೆ ಹಾಗೂ ಸಾರಿಗೆ ನಿಗಮಗಳಿಗೆ 2025-26ನೇ ಸಾಲಿನ ಆಯವ್ಯಯದಲ್ಲಿ 2000 ಡೀಸಲ್ ಬಸ್‌ಗಳನ್ನು ಖರೀದಿಸುವ ಘೋಷಣೆ ಮಾಡಲಾಗಿದ್ದು, ಸದರಿ ಬಸ್ಸುಗಳಲ್ಲಿ ನಿಗಮಕ್ಕೆ ಒಟ್ಟು 400 ಬಸ್ಸುಗಳನ್ನು ಹಂಚಿಕೆ ಮಾಡಲಾಗಿದೆ. ಪ್ರಸ್ತಾಪಿತ 400 ಬಸ್‌ಗಳ ಖರೀದಿಗೆ KKRDB, DULT ಗಳಿಂದ ಸಂಸ್ಥೆಗೆ ನಿಗಧಿಪಡಿಸಲಾಗಿರುವ ಅನುದಾನವನ್ನು ಹೊರತುಪಡಿಸಿ ಉಳಿಕೆ ಮೊತ್ತಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಲಾಗಿದೆ ಹಾಗೂ KKRDBಯಿಂದ ಅನುದಾನ ಒದಗಿಸುವಂತೆ ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯನ್ನು ಕೋರಲಾಗಿದ್ದು, ಸದರಿ ಇಲಾಖೆಯು ಪ್ರಸ್ತಾವನೆ ಕುರಿತು ಅಭಿಪ್ರಾಯ ನೀಡುವಂತೆ KKRDB ಯನ್ನು ಕೋರಿದ್ದು, ನಿರೀಕ್ಷಿಸಲಾಗಿದೆ.<br><br>ಪ್ರಸ್ತುತ ನಿಗಮದಲ್ಲಿ ಒಟ್ಟು 4673 ಅನುಸೂಚಿಗಳಿಂದ 27599 ಸರತಿಗಳಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಇದು ಸಾರವಜನಿಕರ ಅವಶ್ಯಕತೆಗನುಗುಣವಾಗಿದ್ದು, ಬಸ್ಸುಗಳ ಓಡಾಟ ಕಡಿಮೆಯಾಗಿರುವುದಿಲ್ಲ. |

ಸಂಖ್ಯೆ: ಟಿಡಿ 182 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು